# <u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 948 |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ ಬಿ.ಜಿ.ಪಾಟೀಲ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸಬೇಕಾದ ದಿನಾಂಕ** | : | 22-02-2024 |
| **ಉತ್ತರಿಸುವ ಸಚಿವರು** | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| **ಅ)** | ಕಲ್ಯಾಣ ಕರ್ನಾಟಕ ವ್ಯಾಪ್ತಿಯಲ್ಲಿ ಬರುವ ಪ್ರವಾಸಿ ತಾಣಗಳಾದ ಹಂಪಿ, ಮೈಲಾರ, ಗಾಣಗಾಪುರ, ಸನ್ನತಿ ಮತ್ತು ಮಳಖೇಡ, ಬೀದರ್, ರಾಯಚೂರು ಹಾಗೂ ಕಲಬುರಗಿ ಕೋಟೆಗಳ ಸಮಗ್ರ ಅಭಿವೃದ್ಧಿಗಾಗಿ 75 ಕೋಟಿ ರೂ.ಗಳನ್ನು ಒದಗಿಸಲಾಗುವುದೆಂದು 2023-24ರ ಆಯವ್ಯಯದಲ್ಲಿ ಘೋಷಿಸಿದ್ದು, ಇದರಲ್ಲಿ ಎಷ್ಟು ಕೋಟಿ ರೂ.ಗಳನ್ನು ಸರ್ಕಾರ ಬಿಡುಗಡೆ ಮಾಡಿದೆ; (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಟಿಓಆರ್/104/ಟಿಡಿಪಿ/ 2023, ದಿನಾಂಕ:13.12.2023ರಲ್ಲಿ 2023-24ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-295 ರಲ್ಲಿನ "ಕಲ್ಯಾಣ ಕರ್ನಾಟಕ ಭಾಗದ ವ್ಯಾಪ್ತಿಯಲ್ಲಿ ಬರುವ ಪ್ರವಾಸಿ ತಾಣಗಳಾದ ಹಂಪಿ, ಮೈಲಾರ, ಗಾಣಗಾಪುರ, ಸನ್ನತಿ ಮತ್ತು ಮಳಖೇಡ, ಬೀದರ್, ರಾಯಚೂರು ಹಾಗೂ ಕಲಬುರಗಿ ಕೋಟೆಗಳ ಸಮಗ್ರ ಅಭಿವೃದ್ಧಿಗಾಗಿ 75 ಕೋಟಿ ರೂ.ಗಳನ್ನು ಒದಗಿಸಲಾಗುವುದು" ಎಂಬ ಘೋಷಣೆಯನ್ನು ಅನುಷ್ಠಾನಗೊಳಿಸಲು ಹಾಗೂ ಸದರಿ ಘೋಷಣೆ ಅನುಷ್ಠಾನಕ್ಕಾಗಿ ಪ್ರತಿ ವರ್ಷ ರೂ.15.00 ಕೋಟಿಯಂತೆ 5 ವರ್ಷಗಳ ಅವಧಿಯಲ್ಲಿ ಕೈಗೊಳ್ಳಲು ತಾತ್ವಿಕ ಅನುಮೋದನೆ ನೀಡಲಾಗಿದೆ.<br><br>ಅದರಂತೆ, ಪ್ರಸಕ್ತ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಭಾಗದ ಸನ್ನತಿ, ಮೈಲಾರ ಹಾಗೂ ಗಾಣಗಾಪುರ ಪ್ರವಾಸಿ ತಾಣಗಳಲ್ಲಿ ರೂ. 15.00 ಕೋಟಿಗಳ ಅಂದಾಜು ವೆಚ್ಚದಲ್ಲಿ ವಿವಿಧ ಪ್ರವಾಸಿ ಸೌಲಭ್ಯಗಳನ್ನು ಕರ್ನಾಟಕ ಪ್ರವಾಸೋದ್ಯಮ ಮೂಲ ಸೌಲಭ್ಯ ನಿಗಮ (ಕೆ.ಟಿ.ಐ.ಎಲ್.)ದ ಮೂಲಕ ಅಭಿವೃದ್ಧಿ ಪಡಿಸಲು ಸರ್ಕಾರದ ಅನುಮೋದನೆ ನೀಡಿ ಆದೇಶ ಹೊರಡಿಸುವಂತೆ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ ರವರಿಂದ ದಿನಾಂಕ:08-01-2024 ರಂದು ಪ್ರಸ್ತಾವನೆ ಸ್ವೀಕೃತವಾಗಿದ್ದು, ರೂ.15.00 ಕೋಟಿಗಳ ಅನುದಾನವನ್ನು ಒದಗಿಸುವಂತೆ ಆರ್ಥಿಕ ಇಲಾಖೆಯನ್ನು ಕೋರಲಾಗಿದೆ. |
| **ಆ)** | ಈ ಮೇಲ್ಕಂಡ ಪ್ರವಾಸಿ ತಾಣಗಳ ಸಮಗ್ರ ಅಭಿವೃದ್ಧಿಗಾಗಿ ಸರ್ಕಾರ ಒದಗಿಸಿದ ಅನುದಾನದಲ್ಲಿ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳು ಯಾವುವು? (ವಿವರ ನೀಡುವುದು) | ಈ ಯೋಜನೆ ಅಡಿಯಲ್ಲಿ ಪ್ರಸ್ತಾಪಿಸಿರುವ ರೂ.15.00 ಕೋಟಿಗಳ ಅಂದಾಜು ವೆಚ್ಚದ ಕಾಮಗಾರಿಗಳ ವಿವರಗಳನ್ನು **ಅನುಬಂಧ**ದಲ್ಲಿ ಒದಗಿಸಲಾಗಿದೆ. |

TOR 90 TDV 2024

**(ಎಚ್.ಕೆ.ಪಾಟೀಲ)**
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು

**ಶ್ರೀ ಬಿ. ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ), ಮಾನ್ಯ ವಿಧಾನ ಪರಿಷತ್ತು ಸದಸ್ಯರು ಕೇಳಿರುವ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 845 (948) ಕ್ಕೆ ಅನುಬಂಧ.**

ಕಲ್ಯಾಣ ಕರ್ನಾಟಕ ವ್ಯಾಪ್ತಿಯಲ್ಲಿ ಬರುವ ಪ್ರವಾಸಿ ತಾಣಗಳಲ್ಲಿ ಪ್ರಸ್ತಾಪಿಸಿರುವ ಕಾಮಗಾರಿಗಳ ವಿವರ

| ಕ್ರ. ಸಂ. | ಪ್ರವಾಸಿ ತಾಣ | ಜಿಲ್ಲೆ | ಕಾಮಗಾರಿಯ ಹೆಸರು | ಅಂದಾಜು ಮೊತ್ತ (ರೂ.ಕೋಟಿಗಳಲ್ಲಿ) |
|---|---|---|---|---|
| 1. | ಸನ್ನತಿ | ಕಲಬುರಗಿ | ಓಪನ್ ಏರ್ ಮಂದಿರ ,ಮಳಿಗೆಗಳು, ಕೆಫೆಟೇರಿಯಾ, ಗಂಥ್ರಾಲಯ, ಪರಂಪರಾ ಕೇಂದ್ರ ಇತ್ಯಾದಿ. | 1.00 |
| 2. | ಸನ್ನತಿ | ಕಲಬುರಗಿ | ಶ್ರೀ ಚಂದ್ರಲಾ ಪರಮೇಶ್ವರಿ ದೇವಸ್ಥಾನದ ರಸ್ತೆ ಉನ್ನತಿಕರಣ | 3.80 |
| 3. | ಸನ್ನತಿ | ಕಲಬುರಗಿ | ಶ್ರೀ ಚಂದ್ರಲಾ ಪರಮೇಶ್ವರಿ ದೇವಸ್ಥಾನದ ಹತ್ತಿರ ಶೌಚಾಲಯ, ಒಳಗೊಂಡಂತೆ ಮೂಲಸೌಲಭ್ಯಗಳ ಅಭಿವೃದ್ಧಿ, ಕುಡಿಯುವ ನೀರಿನ ಸೌಲಭ್ಯ, ಶೂ ಸ್ಟ್ಯಾಂಡ್, ವಿಶ್ರಾಂತಿ ಕೊಠಡಿ, ಪ್ರಥಮ ಚಿಕಿತ್ಸೆ ಕೇಂದ್ರ, ಪ್ರಸಾದ್ ಕೌಂಟರ್, ಲಗೇಜ್ ಕೊಠಡಿ, ATM ಕಿಯಾಸ್ಕ್, ಕುಳಿತುಕೊಳ್ಳುವ ಆಸನಗಳು, ಧಾರ್ಮಿಕ ಮಾಹಿತಿ ಕೇಂದ್ರ, ಡಸ್ಟ್ ಬೀನ್ , ತ್ಯಾಜ್ಯ ನಿರ್ವಹಣಾ ವ್ಯವಸ್ಥೆ, ಸೂಚನಾ ಫಲಕಗಳು, ಕಂಗಾವಲು ಸಿ.ಸಿ. ಟಿವಿ ಅಳವಡಿಕೆ ಇಲ್ಯಾದಿ ಸೌಲಭ್ಯಗಳನ್ನು ಅಭಿವೃದ್ಧಿಪಡಿಸುವ ಕಾಮಗಾರಿಗಳು. | 3.00 |
| 4. | ಮೈಲಾರ | ಯಾದಗಿರಿ | ಶ್ರೀ ಮೈಲಾರಲಿಂಗೇಶ್ವರ ದೇವಸ್ಥಾನದ ಹತ್ತಿರ ಶೌಚಾಲಯ, ಒಳಗೊಂಡಂತೆ ಮೂಲಸೌಲಭ್ಯಗಳ ಅಭಿವೃದ್ಧಿ, ಕುಡಿಯುವ ನೀರಿನ ಸೌಲಭ್ಯ, ಶೂ ಸ್ಟ್ಯಾಂಡ್, ವಿಶ್ರಾಂತಿ ಕೊಠಡಿ, ಪ್ರಥಮ ಚಿಕಿತ್ಸೆ ಕೇಂದ್ರ, ಪ್ರಸಾದ್ ಕೌಂಟರ್, ಲಗೇಜ್ ಕೊಠಡಿ, ATM ಕಿಯಾಸ್ಕ್, ಕುಳಿತುಕೊಳ್ಳುವ ಆಸನಗಳು, ಧಾರ್ಮಿಕ ಮಾಹಿತಿ ಕೇಂದ್ರ, ಡಸ್ಟ್ ಬೀನ್ , ತ್ಯಾಜ್ಯ ನಿರ್ವಹಣಾ ವ್ಯವಸ್ಥೆ, ಸೂಚನಾ ಫಲಕಗಳು, ಕಂಗಾವಲು ಸಿ.ಸಿ. ಟಿವಿ ಅಳವಡಿಕೆ ಇಲ್ಯಾದಿ ಸೌಲಭ್ಯಗಳನ್ನು ಅಭಿವೃದ್ಧಿಪಡಿಸುವ ಕಾಮಗಾರಿಗಳು. | 3.00 |
| 5. | ಗಾಣಗಾಪುರ | ಕಲಬುರಗಿ | ಗಾಣಗಾಪುರದ ಶ್ರೀ ಕ್ಷೇತ್ರ ದತ್ತಾತ್ರೇಯ ದೇವಸ್ಥಾನದ ಹತ್ತಿರ ಶೌಚಾಲಯ, ಒಳಗೊಂಡಂತೆ ಮೂಲಸೌಲಭ್ಯಗಳ ಅಭಿವೃದ್ಧಿ, ಕುಡಿಯುವ ನೀರಿನ ಸೌಲಭ್ಯ, ಶೂ ಸ್ಟ್ಯಾಂಡ್, ವಿಶ್ರಾಂತಿ ಕೊಠಡಿ, ಪ್ರಥಮ ಚಿಕಿತ್ಸೆ ಕೇಂದ್ರ, ಪ್ರಸಾದ್ ಕೌಂಟರ್, ಲಗೇಜ್ ಕೊಠಡಿ, ATM ಕಿಯಾಸ್ಕ್, ಕುಳಿತುಕೊಳ್ಳುವ ಆಸನಗಳು, ಧಾರ್ಮಿಕ ಮಾಹಿತಿ ಕೇಂದ್ರ, ಡಸ್ಟ್ ಬೀನ್ , ತ್ಯಾಜ್ಯ ನಿರ್ವಹಣಾ ವ್ಯವಸ್ಥೆ, ಸೂಚನಾ ಫಲಕಗಳು, ಕಂಗಾವಲು ಸಿ.ಸಿ. ಟಿವಿ ಅಳವಡಿಕೆ ಇಲ್ಯಾದಿ ಸೌಲಭ್ಯಗಳನ್ನು ಅಭಿವೃದ್ಧಿಪಡಿಸುವ ಕಾಮಗಾರಿಗಳು. | 3.00 |
| 6. | ಗಾಣಗಾಪುರ | ಕಲಬುರಗಿ | ಗಾಣಗಾಪುರದ ಶ್ರೀ ಕ್ಷೇತ್ರ ದತ್ತಾತ್ರೇಯ ದೇವಸ್ಥಾನದ ವ್ಯವಸ್ಥೆ ಉನ್ನತಿಕರಿಸುವ ಕಾಮಗಾರಿ | 1.20 |
| | | | ಒಟ್ಟು ಮೊತ್ತ | **15.00** |